ಚಾಸಾ-13 ಪ್ರಾಸಾ-7

# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ.

# ಸಿ ಸಿ - 47/2019

ದಿನಾಂಕಃ 10.11.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

| | | |
|---|---|---|
| ಹೆಸರು | : | ಬಿ ಜೀತೇಂದ್ರಪ್ಪ |
| ತಂದೆಯ ಹೆಸರು | : | ವೀರಭದ್ರಪ್ಪ |
| ವಯಸ್ಸು | : | 70 ವರ್ಷ |
| ಉದ್ಯೋಗ | : | ನಿವೃತ್ತ ಪಿ ಎಸ್ ಐ |
| ವಾಸಸ್ಥಳ | : | ಚಿತ್ರದುರ್ಗ |

## ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ

ನಾನು ದಿಃ11.11.2011 ರಿಂದ ದಿಃ 03.05.2015 ರವರೆಗೆ ಹೊಸಳ್ಳಿ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ09.03.2014 ರಂದು ಮಧ್ಯಾಹ್ನ 12.30 ರ ಸಮಯದಲ್ಲಿ ಚಾಸಾ 1 ರವರು ನೀಡಿದ ಮೌಖಿಕ ದೂರನ್ನು ಸ್ವೀಕರಿಸಿ ಪ್ರಕರಣ ದಾಖಲಿಸಿ ಪ್ರ.ವ.ವ ಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗೆ ಸಲ್ಲಿಸಿರುತ್ತೇನೆ.

ನಾನು ಸ್ವೀಕರಿಸಿದ ದೂರನ್ನು ಈಗಾಗಲೇ ನಿಪಿ 1 ಎಂದು ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 1-ಬಿ ಎಂದು ಗುರುತಿಸಲಾಯಿತು. ಪ್ರ.ವರದಿಯನ್ನು ನೋಡುತ್ತಿದ್ದು ಅದನ್ನು ನಿ.ಪಿ 8 ಎಂದು ಗುರುತಿಸಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 8-ಎ ಎಂದು ಗುರುತಿಸಲಾಯಿತು.

ಅದೇ ದಿನ ಸಂಜೆ 4 ಗಂಟೆಗೆ ಘಟನ ಸ್ಥಳಕ್ಕೆ ಬೇಟಿ ಕೊಟ್ಟು ಚಾಸಾ 7 ರವರು ಸ್ಥಳ ಮೇರೆಗೆ ಚಾಸಾ 2 ಮತ್ತು ಚಾಸಾ 3 ರವರ ಸಮಕ್ಷಮ ಸಂಜೆ 4 ರಿಂದ 4.30 ರವರಿಗೆ ಜರುಗಿಸಿರುತ್ತೇನೆ. ಸದರಿ ಕೃತ್ಯ ಸ್ಥಳದ ಪಂಚನಾಮೆಯನ್ನು ಅದನ್ನು ನಿ.ಪಿ 9 ಎಂದು ಗುರುತಿಸಿದ್ದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 9-ಎ ಎಂದು ಗುರುತಿಸಲಾಯಿತು.

ಆ ನಂತರ ಮುಂದಿನ ತನಿಖೆಗಾಗಿ ಈ ಪ್ರಕರಣದ ಕಡತವನ್ನು ಚಾ.ಸಾ 15 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ**

ನಾನು ಹೇಳುವ ರೀತಿಯಲ್ಲಿ ಯಾವುದೇ ದೂರನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಸ್ಥಳಕ್ಕೆ ಹೋಗಿಲ್ಲ ಅಲ್ಲಿ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ಮೃತ ವ್ಯಕ್ತಿಗೆ ಪರಿಹಾರ ಕೊಡಿಸುವ ಉದ್ದೇಶಕ್ಕಾಗಿ ಸುಳ್ಳು ಪ್ರಕರಣವನ್ನು ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

ಆರೋಪಿ ಯಾವುದೇ ತಪ್ಪನ್ನು ಮಾಡದೆ ಇದ್ದರು ಆರೋಪಿ ವಿರುದ್ಧ ಸುಳ್ಳು ದೋಷರೋಪಣೆ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**